ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	1104
ಸದಸ್ಯರ ಹೆಸರು	:	ಶ್ರೀಮತಿ ಎಸ್.ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು)
ಉತ್ತರಿಸುವ ದಿನಾಂಕ	:	22.12.2021
ಉತ್ತರಿಸುವ ಸಚಿವರು	:	ಕಂದಾಯ ಸಚಿವರು

ಕ್ರಮ ಸಂಖ್ಯೆ	ಪ್ರಶ್ನೆ	ಉತ್ತರ
(ಅ)	ಕೊಡಗು ಜಿಲ್ಲೆಯಲ್ಲಿ, ಮಾಜಿ ಸೈನಿಕರು ಹಾಗೂ ಅವರ ಅವಲಂಬಿತರು ಪೈಸಾರಿ ಜಾಗವನ್ನು ಒತ್ತುವರಿ ಮಾಡಿಕೊಂಡು ವ್ಯವಸಾಯ ಮಾಡುತ್ತಾ ಬಂದಿರುವ ಜಾಗಕ್ಕೆ ಈಗಾಗಲೇ ವಿತರಿಸಿರುವ ಹಕ್ಕುಪತ್ರವನ್ನು ರದ್ದುಪಡಿಸಿರುವುದರಿಂದ, ಮಾಜಿ ಸೈನಿಕರಿಗೆ ಅನ್ಯಾಯವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಪೈಸಾರಿ ಜಾಗವನ್ನು ಒತ್ತುವರಿ ಮಾಡಿಕೊಂಡಿರುವ ಪ್ರಕರಣದಲ್ಲಿ ಕರ್ನಾಟಕ ಭೂ ಕಂದಾಯ ಕಾಯ್ದೆ 1964ರ ಸೆಕ್ಷನ್ 94ಎ, ಬಿ ಮತ್ತು ಎ(4) ಗಳಲ್ಲಿ ನಿರ್ದಿಷ್ಟಪಡಿಸಿದ ಅರ್ಹತೆಯಂತೆ ಭೂ ಮಂಜೂರಾತಿಗೆ ಕ್ರಮ ಕೈಗೊಳ್ಳಲಾಗುತ್ತಿದೆ. ಮಾಜಿ ಸೈನಿಕರಿಗೆ ಮಂಜೂರಾದ ಪ್ರಕರಣಗಳಲ್ಲಿ ನಿಯಮಬಾಹಿರವಾಗಿ ರದ್ದುಪಡಿಸಿರುವುದು ಕೊಡಗು ಜಿಲ್ಲೆಯಲ್ಲಿ ವರದಿಯಾಗಿರುವುದಿಲ್ಲ.
(ಆ)	ಬಂದಿದ್ದಲ್ಲಿ, ಈಗಾಗಲೇ ನೀಡಿರುವ ಹಕ್ಕುಪತ್ರಗಳನ್ನು ಏಕಾಏಕಿ ರದ್ದು ಮಾಡಲು ಕಾರಣಗಳೇನು;	ಅನ್ವಯಿಸುವುದಿಲ್ಲ
(ಇ)	ಜಿಲ್ಲಾಡಳಿತದಿಂದ ಸೂಕ್ತ ಹಾಗೂ ವಿಸ್ತಾರವಾದ ವಿಚಾರಣೆ ಮಾಡಿ, ದೇಶ ಸೇವೆಗೆ ತಮ್ಮ ಜೀವನವನ್ನೇ ಮುಡುಪಾಗಿಟ್ಟ ಮಾಜಿ ಸೈನಿಕರಿಗೆ ನ್ಯಾಯ ಒದಗಿಸಲು ಕ್ರಮವಹಿಸಲಾಗುವುದೇ?	

(ಕಡತ ಸಂಖ್ಯೆ:ಕಂಇ 23 ಎಲ್‌ಜಿಓ 2021)

(ಆರ್.ಅಶೋಕ)
ಕಂದಾಯ ಸಚಿವರು